ನಿ-330
ಕ್ರ-48- ಕಾಲ್ಯಾ(ಗಳು)

**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಎಸ್.ಎಲ್. ಭೋಜೇಗೌಡ ನಿಯಮ-330 ರ ಮೇರೆಗೆ ನೀಡಿರುವ ಸೂಚನೆಗೆ ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಹೇಳಿಕೆ.**

**ಸೂಚನೆ**:

ರಾಜ್ಯದ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರುಗಳಿಗೆ ಸರ್ಕಾರ ನೀಡುತ್ತಿರುವ ವೇತನವು ಬಹಳ ಕಡಿಮೆಯಾಗಿರುವುದರಿಂದ ಈ ವೇತನವನ್ನು ದೇಶದ ಇತರೆ ರಾಜ್ಯಗಳಾದ ರಾಜಸ್ಥಾನ, ಹರಿಯಾಣ, ದೆಹಲಿ, ಮಾದರಿಯಂತೆ ವೇತನ ಹೆಚ್ಚಳ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ಹಾಗೂ ಈ ಅತಿಥಿ ಉಪನ್ಯಾಸಕರುಗಳಿಗೆ ಅನಾರೋಗ್ಯದ ರಜೆ ಹಾಗೂ ಸಾಂದರ್ಭಿಕ ರಜೆಯನ್ನು ತಿಂಗಳಿಗೆ 2 ದಿನ ನಿಗದಿ ಮಾಡುವುದು ಮತ್ತು ಕಾರ್ಯಭಾರವನ್ನು ಕಡಿತಗೊಳಿಸುವುದು ಹಾಗೂ ಅತಿಥಿ ಉಪನ್ಯಾಸಕರನ್ನು ಖಾಯಂ ಮಾಡಲು ಕರ್ನಾಟಕ ನಾಗರೀಕ ಸೇವಾ ನಿಯಮ 1977ರ 14 ಅಡಿಯಲ್ಲಿ ಮತ್ತು ಕರ್ನಾಟಕ ಸಿವಿಲ್ ಸರ್ವಿಸ್ ಆಕ್ಟ್ 1978 ರ ನಿಯಮಗಳಲ್ಲಿ ಇವರ ಸೇವೆಯನ್ನು ವಿಲೀನಗೊಳಿಸಿ ಅತಿಥಿ ಉಪನ್ಯಾಸಕರಿಗೆ ಸೇವಾ ಭದ್ರತೆಯನ್ನು ನೀಡಲು ಸರ್ಕಾರವನ್ನು ಒತ್ತಾಯಿಸುತ್ತೇನೆ.

**ಹೇಳಿಕೆ:**

ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 88 ಡಿಸಿಇ 2003, ದಿನಾಂಕ:18-12-2003 ರಲ್ಲಿ ಖಾಯಂ ಉಪನ್ಯಾಸಕರಿಗೆ ನಿಗದಿತ ಕಾರ್ಯಭಾರವನ್ನು ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಕಾರ್ಯಭಾರವನ್ನು ನಿರ್ವಹಿಸಲು, ಅರೆಕಾಲಿಕ ಉಪನ್ಯಾಸಕರ ಬದಲಿಗೆ, ಅತಿಥಿ ಉಪನ್ಯಾಸಕರ ಸೇವೆಯನ್ನು ಬಳಸಿಕೊಳ್ಳಲು ಅವಕಾಶ ಕಲ್ಪಿಸಲಾಗಿರುತ್ತದೆ. ಖಾಯಂ ಉಪನ್ಯಾಸಕರಿಗೆ ವಾರಕ್ಕೆ 16/20 ಗಂಟೆಗಳ ಕಾರ್ಯಭಾರವನ್ನು ನಿಗಧಿಪಡಿಸಲಾಗಿದ್ದು, ಅತಿಥಿ ಉಪನ್ಯಾಸಕರಿಗೆ ಅದರಲ್ಲಿ ಅರ್ಧದಷ್ಟು ಅಂದರೆ ಗರಿಷ್ಠ 8/10 ಗಂಟೆಗಳ ಕಾರ್ಯಭಾರವನ್ನು ನಿಗಧಿಪಡಿಸಲಾಗಿತ್ತು. ಅತಿಥಿ ಉಪನ್ಯಾಸಕರಲ್ಲಿ ಯು.ಜಿ.ಸಿ. ವಿದ್ಯಾರ್ಹತೆ ಹೊಂದಿದವರಿಗೆ ರೂ.13,000/- ಹಾಗೂ ಯು.ಜಿ.ಸಿ. ವಿದ್ಯಾರ್ಹತೆ ಇಲ್ಲದವರಿಗೆ ರೂ.11,000/-ಗಳ ಗೌರವಧನವನ್ನು ನಿಗಧಿಪಡಿಸಲಾಗಿತ್ತು.

ನಂತರ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅತಿಥಿ ಉಪನ್ಯಾಸಕರುಗಳ ಗೌರವಧನ ಹೆಚ್ಚಳ ಹಾಗೂ ಇತರೆ ಬೇಡಿಕೆಗಳಿಗೆ ಸಂಬಂಧಿಸಿದಂತೆ, ಸರ್ಕಾರದ ಉನ್ನತ ಮಟ್ಟದ ಅಧಿಕಾರಿಗಳ ಸಮಿತಿಯನ್ನು ರಚಿಸಲಾಗಿತ್ತು. ಉನ್ನತ ಮಟ್ಟದ ಅಧಿಕಾರಿಗಳ ಸಮಿತಿಯು ಸರ್ಕಾರಕ್ಕೆ ಸಲ್ಲಿಸಿದ ವರದಿಯನ್ನು ಪರಿಶೀಲಿಸಿ, ಸರ್ಕಾರವು ಹೊರಡಿಸಿದ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021, ದಿನಾಂಕ:14.01.2022 & ತಿದ್ದುಪಡಿ ಆದೇಶ ದಿನಾಂಕ: 24.01.2022 ರಲ್ಲಿ ಅತಿಥಿ ಉಪನ್ಯಾಸಕರಿಗೆ ಪ್ರಸ್ತುತ ನೀಡಲಾಗುತ್ತಿರುವ ಗರಿಷ್ಠ 8/10 ಗಂಟೆಗಳ ಬದಲಾಗಿ, ಗರಿಷ್ಠ 15/19 ಗಂಟೆಗಳ ಕಾರ್ಯಭಾರವನ್ನು ನೀಡಿ, ಗೌರವಧನವನ್ನು ಈ ಕೆಳಗಿನಂತೆ ಹೆಚ್ಚಿಸಲಾಗಿದೆ.

ಅ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.32,000/- (ಮೂವತ್ತೆರಡು ಸಾವಿರ ಮಾತ್ರ)

ಆ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.30,000/- (ಮೂವತ್ತು ಸಾವಿರ ಮಾತ್ರ)

ಇ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.28,000/- (ಇಪ್ಪತ್ತೆಂಟು ಸಾವಿರ ಮಾತ್ರ)

ಈ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.26,000/- (ಇಪ್ಪತ್ತಾರು ಸಾವಿರ ಮಾತ್ರ)

2....

2021-22ನೇ ಶೈಕ್ಷಣಿಕ ಸಾಲಿನಲ್ಲಿ ಗರಿಷ್ಠ 15/19 ಗಂಟೆಗಳ ಕಾರ್ಯಭಾರ ಹಾಗೂ ಭಾಗಶಃ ಲಭ್ಯವಾಗುವ ಕಾರ್ಯಭಾರಕ್ಕೆ ಅಗತ್ಯವಿರುವ ಅತಿಥಿ ಉಪನ್ಯಾಸಕರನ್ನು ಕೇಂದ್ರಿಕೃತ ಆನ್‌ಲೈನ್ ಕೌನ್ಸಿಲಿಂಗ್ ಮೂಲಕ ರಾಜ್ಯವ್ಯಾಪಿ ಮೆರಿಟ್/ಆಯ್ಕೆಪಟ್ಟಿ ಸಿದ್ಧಪಡಿಸಿ ನೇಮಿಸಿಕೊಳ್ಳಲಾಗಿದೆ. ಅಲ್ಲದೆ, ಅತಿಥಿ ಉಪನ್ಯಾಸಕರ ನೇಮಕಾತಿಯಲ್ಲಿ ಯು.ಜಿ.ಸಿ. ವಿದ್ಯಾರ್ಹತೆ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಸೇವಾ ಅನುಭವ ಹೊಂದಿರುವವರಿಗೆ ಆದ್ಯತೆ ಮೇರೆಗೆ ಪರಿಗಣಿಸಲಾಗಿದೆ.

ಮಾನ್ಯ ಸರ್ವೋಚ್ಚ ನ್ಯಾಯಾಲಯದ ಸಾಂವಿಧಾನಿಕ ಪೀಠವು ಸಿವಿಲ್ ಅಪೀಲ್ ಸಂಖ್ಯೆ: 3595-3612/1999, ಉಮಾದೇವಿ ವಿರುದ್ಧ ಕರ್ನಾಟಕ ಸರ್ಕಾರ ಮತ್ತು ಇತರರು ಪ್ರಕರಣದಲ್ಲಿ ದಿನಾಂಕ:10-04-2006 ರಂದು ನೀಡಿರುವ ತೀರ್ಪಿನಲ್ಲಿ ನೇಮಕಾತಿ ನಿಯಮಗಳಂತೆ ನೇಮಕಾತಿ ಆಗದಿರುವ ವ್ಯಕ್ತಿಗಳಿಗೆ ಸಕ್ರಮಾತಿಯ ಹಕ್ಕು ದೊರೆಯುವುದಿಲ್ಲವೆಂದು ಹಾಗೂ ಇಂತಹ ನಿಯಮಬಾಹಿರ ನೇಮಕಾತಿಯನ್ನು ಸಕ್ರಮಾತಿಗೊಳಿಸಬಾರದೆಂದು ಆದೇಶಿಸಲಾಗಿರುತ್ತದೆ.

ಈ ಹಿನ್ನೆಲೆಯಲ್ಲಿ, ತಾತ್ಕಾಲಿಕ ವ್ಯವಸ್ಥೆಯಡಿ ಕಾರ್ಯನಿರ್ವಹಿಸಿರುವ ಅತಿಥಿ ಉಪನ್ಯಾಸಕರ ಸೇವೆಯನ್ನು ಸಕ್ರಮಾತಿಗೊಳಿಸಿದ್ದಲ್ಲಿ, ಅದು Perpetuate an illegality in the matter of public employment ಆಗುವುದರಿಂದ ಮಾನ್ಯ ಸರ್ವೋಚ್ಚ ನ್ಯಾಯಾಲಯವು ಉಮಾದೇವಿ ಪ್ರಕರಣದಲ್ಲಿ ವ್ಯಕ್ತಪಡಿಸಿರುವ ನಿಲುವಿಗೆ ವಿರುದ್ಧವಾಗುತ್ತದೆ. ಅದು ಕಾನೂನು ವಿರುದ್ಧವಾದದ್ದು ಹಾಗೂ ಸಾಮಾಜಿಕ ನ್ಯಾಯಕ್ಕೆ ವಿರುದ್ಧವಾದದ್ದು.

ಅಲ್ಲದೆ, ಅತಿಥಿ ಉಪನ್ಯಾಸಕರ ಸೇವೆಯನ್ನು ಸಕ್ರಮಾತಿಗೊಳಿಸುವಂತೆ ಕೋರಿ ಮಾನ್ಯ ಕರ್ನಾಟಕ ಆಡಳಿತ ನ್ಯಾಯಮಂಡಳಿಯಲ್ಲಿ ಸಲ್ಲಿಸಿದ್ದ ಅರ್ಜಿ ಸಂಖ್ಯೆ: 4625-4640/201 (ಶ್ರೀ ವೀರಣ್ಣ ಎಸ್. ಸಜ್ಜನರ್ ಮತ್ತು ಇತರರು), ಅರ್ಜಿ ಸಂಖ್ಯೆ:2526-2532/2014 (ಶ್ರೀ ಕೆ.ಆರ್.ವಿಶ್ವಕುಮಾರ್ & ಇತರರು), ಅರ್ಜಿ ಸಂಖ್ಯೆ:1579-1585/2017 (ಶ್ರೀ ಜಯಚಂದ್ರ ಕೆ.ಇ. & ಇತರರು) ಮತ್ತು ಇತ್ತೀಚಿನ ಅರ್ಜಿ ಸಂಖ್ಯೆ:823-839/2020 (ಶ್ರೀ ಸಕಲೇಶ್ ಹೆಚ್.ಜಿ & ಇತರರು)ಗಳಿಗೆ ಮಾನ್ಯ ನ್ಯಾಯಮಂಡಳಿಯು ನೀಡಿದ ತೀರ್ಪಿನಲ್ಲಿ 'ಮಾನ್ಯ ಸರ್ವೋಚ್ಚ ನ್ಯಾಯಾಲಯದ ಸಂವಿಧಾನ ಪೀಠವು ಉಮಾದೇವಿ ಪ್ರಕರಣದಲ್ಲಿ ತಾತ್ಕಾಲಿಕ ನೌಕರರನ್ನು ಅವರ ಸೇವಾವಧಿಯನ್ನು ಆಧರಿಸಿ ಸೇವಾ ಸಕ್ರಮಾತಿಗೆ ಪರಿಗಣಿಸಲು ಅರ್ಹರಾಗಿರುವುದಿಲ್ಲವೆಂದು, ಅದೇ ರೀತಿ, ನೇಮಕಾತಿ ನಿಯಮಗಳಂತೆ ನೇಮಕಾತಿ ಆಗದಿರುವ ವ್ಯಕ್ತಿಗಳಿಗೆ ಸಕ್ರಮಾತಿಯ ಹಕ್ಕು ದೊರೆಯುವುದಿಲ್ಲವೆಂದು ಹಾಗೂ ಇಂತಹ ನಿಯಮಬಾಹಿರ ನೇಮಕಾತಿಯನ್ನು ಸಕ್ರಮಾತಿಗೊಳಿಸಬಾರದೆಂದು' ತಿಳಿಸಿರುವ ನಿಲುವನ್ನು ಆಧರಿಸಿ ಸದರಿ ಅರ್ಜಿಗಳನ್ನು ವಜಾಗೊಳಿಸಿರುತ್ತದೆ.

ಸರ್ಕಾರದ ಸುತ್ತೋಲೆ ಸಂಖ್ಯೆ:ಇಡಿ/55/ಡಿಸಿಇ/2005, ದಿನಾಂಕ:25.08.2012 ರಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಪದವಿ ಕಾಲೇಜುಗಳಲ್ಲಿ 1994-95 ರ ನಂತರ ಅರೆಕಾಲಿಕ ಉಪನ್ಯಾಸಕರಾಗಿ ಮತ್ತು 2004-05 ರ ನಂತರ ಅತಿಥಿ ಉಪನ್ಯಾಸಕರಾಗಿ ಕಾರ್ಯನಿರ್ವಹಿಸುತ್ತಿರುವವರನ್ನು ಯಾವುದೇ ಕಾರಣಕ್ಕೂ ಸಕ್ರಮಗೊಳಿಸಲಾಗುವುದಿಲ್ಲ. ಅದು ಕಾನೂನು ವಿರುದ್ಧವಾದದ್ದು ಹಾಗೂ ಸಾಮಾಜಿಕ ನ್ಯಾಯಕ್ಕೆ ವಿರುದ್ಧವಾದದ್ದು, ಆದುದರಿಂದ, ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಖಾಲಿ ಇರುವ/ಮುಂದೆ ಉದ್ಭವಿಸಬಹುದಾದ ಉಪನ್ಯಾಸಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕವೇ ತುಂಬಬೇಕಾಗುತ್ತದೆ ಎಂಬುದಾಗಿ ಸ್ಪಷ್ಟವಾಗಿ ತಿಳಿಸಲಾಗಿರುತ್ತದೆ.

ಆದ್ದರಿಂದ, ನೇಮಕಾತಿ ನಿಯಮಗಳಂತೆ ನೇಮಕಾತಿ ಆಗದಿರುವ ಹಾಗೂ ತಾತ್ಕಾಲಿಕ ವ್ಯವಸ್ಥೆಯಡಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ತಾತ್ಕಾಲಿಕ ಸೇವೆಯನ್ನು ಪರಿಗಣಿಸಿ, ಸೇವೆಯಲ್ಲಿ ವಿಲೀನಗೊಳಿಸಲು ಅವಕಾಶ ಇರುವುದಿಲ್ಲ.

**ಇಡಿ 336 ಡಿಸಿಇ 2022**

**(ಡಾ: ಅಶ್ವತ್ಥ ನಾರಾಯಣ ಸಿ.ಎನ್.)**
ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ. ವಿಜ್ಞಾನ ಮತ್ತು
ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.